# Akashvani : Bangalore
# Regional Bulletin In Kannada
# 22.10.2024 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮೈಸೂರಿನ ವರುಣಾ ಕ್ಷೇತ್ರದಲ್ಲಿ ೫೦೧ ಕೋಟಿ ಮೊತ್ತದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

- ಬೆಂಗಳೂರಿನ ಮಳೆ ಬಾಧಿತ ಪ್ರದೇಶಗಳಲ್ಲಿ ಜನ ಜೀವನ ಅಸ್ತವ್ಯಸ್ತ ; ಅಧಿಕಾರಿಗಳಿಂದ ಪರಿಹಾರ ಕಾರ್ಯಾಚರಣೆ

- ರಾಜ್ಯದ ಹಲವೆಡೆ ಇಂದು ಧಾರಾಕಾರ ಮಳೆ ಸಾಧ್ಯತೆ ; ಬೆಂಗಳೂರಿನಲ್ಲೂ ಗುಡುಗು ಸಹಿತ ಮಳೆಯ ಮುನ್ನೆಚ್ಚರಿಕೆ

- ವಿಧಾನಸಭೆ ಉಪಚುನಾವಣೆ ; ಮೂರು ಕ್ಷೇತ್ರಗಳಿಂದ ಒಟ್ಟು ೨೦ ನಾಮಪತ್ರಗಳು ಸಲ್ಲಿಕೆ

- ನಾಳೆ ಕಿತ್ತೂರು ಚೆನ್ನಮ್ಮ ವಿಜಯೋತ್ಸವದ ೨೦೦ನೇ ವರ್ಷಾಚರಣೆ ; ಬೆಳಗಾವಿ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದಾರೆ. ಒಟ್ಟು ೫೦೧ ಕೋಟಿ ೮೧ ಲಕ್ಷ ರೂಪಾಯಿ ಮೌಲ್ಯದ ೩೧೩ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು. ಇದೇ ವೇಳೆ ಮಾತನಾಡಿದ ಮುಖ್ಯಮಂತ್ರಿಯವರು, ರಾಜ್ಯದ ಜನ ತಮ್ಮೊಂದಿಗೆ ಇರುವವರೆಗೂ ಬಿಜೆಪಿ-ಜೆಡಿಎಸ್ ಷಡ್ಯಂತ್ರಕ್ಕೆ ಹೆದರುವುದಿಲ್ಲ ಎಂದು ತಿಳಿಸಿದರು. ಸಾಮಾಜಿಕ ನ್ಯಾಯದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ ಅವರು, ಕೇಂದ್ರದಿಂದ ರಾಜ್ಯಕ್ಕೆ ನಿರಂತರ ಅನ್ಯಾಯವಾಗುತ್ತಿದ್ದು, ಇದನ್ನು ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಧ್ವನಿ : ಸಿದ್ದರಾಮಯ್ಯ

ಇದೇ ವೇಳೆ ಮಾತನಾಡಿದ ಸಣ್ಣ ನೀರಾವರಿ ಸಚಿವ ಎಸ್.ಎಸ್. ಬೋಸರಾಜು, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರಾಜ್ಯಾದ್ಯಂತ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ. ಮಾತು ಕೊಟ್ಟಂತೆ ನಡೆದುಕೊಂಡಂತ ರಾಜಕಾರಣಿ ಅಂದರೆ ಅದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಂದು ಹೇಳಿದರು. ರಾಜ್ಯದಲ್ಲಿ ಜಾರಿಯಲ್ಲಿರುವ ಗ್ಯಾರಂಟಿ ಯೋಜನೆಗಳು ದೇಶದ ಇತರೆ ರಾಜ್ಯಗಳಲ್ಲೂ ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

<><*<><>*><>

ಬೆಂಗಳೂರಿನ ಮಳೆ ಪೀಡಿತ ಪ್ರದೇಶಗಳಲ್ಲಿ ಕಳೆದ ೪೮ ಗಂಟೆಗಳಿಂದ ಅಧಿಕಾರಿಗಳ ತಂಡ ನಿರಂತರವಾಗಿ ಪರಿಹಾರ ಕಾರ್ಯದಲ್ಲಿ ತೊಡಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರವಾಹ ಪರಿಸ್ಥಿತಿ ಎದುರಿಸುತ್ತಿರುವ ಸ್ಥಳಗಳನ್ನು ಗುರುತಿಸಿ ಶಾಶ್ವತ ಪರಿಹಾರ ನೀಡಲು ಸಮಿತಿ ರಚಿಸಲಾಗಿದೆ ಎಂದು ಹೇಳಿದ್ದಾರೆ. ಚೌಡೇಶ್ವರಿ ನಗರದಲ್ಲಿ ಅತ್ಯಧಿಕ ೧೫೦ ಮಿಲೀ ಮೀಟರ್ ಮಳೆಯಾಗಿದೆ. ಇನ್ನು ಕೆಲವು ಕಡೆಗಳಲ್ಲಿ ವಾಡಿಕೆಗಿಂತ ಶೇಕಡ ೩೦೦ರಷ್ಟು ಹೆಚ್ಚಿನ ಮಳೆಯಾಗಿದೆ. ಕೇಂದ್ರಿಯ ವಿದ್ಯಾಲಯ ಹಾಗೂ ಟಾಟಾನಗರದಿಂದ ಸುಮಾರು ೬೦೦ ಕುಟುಂಬಗಳನ್ನು ಸ್ಥಳಾಂತರಗೊಳಿಸಲು ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು. ಐದು ಎಸ್‌ಡಿಆರ್‌ಎಫ್ ಹಾಗೂ ಎನ್‌ಡಿಆರ್‌ಎಫ್ ತಂಡಗಳನ್ನು ಕಾರ್ಯಾಚರಣೆಗೆ ನಿಯೋಜನೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದರು.

**<><*<><>*><>**

ಬೆಂಗಳೂರಿನ ಯಲಹಂಕ ವಲಯ ವ್ಯಾಪ್ತಿಯ ಕೆಲ ಪ್ರದೇಶಗಳಲ್ಲಿ ಧಾರಕಾರ ಮಳೆಯಾಗಿದ್ದು, ಹಲವು ಪ್ರದೇಶಗಳು ಜಲಾವೃತಗೊಂಡಿವೆ. ಯಲಹಂಕ ವಲಯ ವ್ಯಾಪ್ತಿಯಲ್ಲಿ ಮಳೆ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಕೂಡಲೇ ತುರ್ತು ಕ್ರಮಗಳನ್ನು ಕೈಗೊಂಡು ಸಮಸ್ಯೆ ಬಗೆಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅಧಿಕ ಸಮಸ್ಯೆಯಿರುವ ಕಡೆ ನಿವಾಸಿಗಳನ್ನು ಬೇರೆಡೆ ಸ್ಥಳಾಂತರಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ಬಾಧಿತ ಪ್ರದೇಶಗಳಲ್ಲಿರುವ ನಿವಾಸಿಗಳಿಗೆ ಕುಡಿಯುವ ನೀರು, ಹಾಲು, ಬಿಸ್ಕೆಟ್, ಊಟದ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಸೂಚನೆ ನೀಡಿದರು. ಭದ್ರಪ್ಪ ಲೇಔಟ್, ಟಾಟಾ ನಗರ ಸೇರಿದಂತೆ ಹೆಚ್ಚು ನೀರು ನಿಂತಿರುವ ಪ್ರದೇಶಗಳಲ್ಲಿ ನೀರನ್ನು ಹೊರ ಹಾಕುವಂತೆ ತಿಳಿಸಿದ್ದಾರೆ. ರಾಜಕಾಲುವೆಗಳ ಪ್ರಮುಖ ಸ್ಥಳಗಳಲ್ಲಿ ಜೆಸಿಬಿಗಳ ಮೂಲಕ ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಲು ಸೂಚಿಸಿದರು. ಯಲಹಂಕ ವಲಯ ವ್ಯಾಪ್ತಿಯಲ್ಲಿ ಭಾರೀ ಮಳೆಯಾಗಿರುವ ಕಾರಣ ಹೆಚ್ಚುವರಿ ಮೇಲ್ವಿಚಾರಣೆಗಾಗಿ ಪಾಲಿಕೆ ಇತರೆ ವಲಯಗಳ ಐ.ಎ.ಎಸ್, ಕೆ.ಎ.ಎಸ್ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ.

**<><*<><>*><>**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಅಪಾರ ಪ್ರಮಾಣದ ಬೆಳೆ ನಷ್ಟವಾಗಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಗುಡುಗು ಸಹಿತ ಭಾರಿ ಮಳೆಯಾಗುತ್ತಿದ್ದು ಜನರು ಎಚ್ಚರಿಕೆಯಿಂದ ಇರುವಂತೆ ಜಿಲ್ಲಾಡಳಿತ ಮನವಿ ಮಾಡಿದೆ. ನದಿಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದ್ದು, ಜನರು ನದಿಗೆ ಇಳಿಯದಂತೆ ಸೂಚನೆ ನೀಡಲಾಗಿದೆ. ಜಿಲ್ಲೆಯ ಪ್ರವಾಸಿ-ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಮುಂದಿನ ಒಂದು ವಾರ ಪ್ರವಾಸ ಮುಂದೂಡುವಂತೆ ಸೂಚಿಸಲಾಗಿದೆ. ಹೆಚ್ಚು ಮಳೆಯಿಂದಾಗಿ ಜಿಲ್ಲೆಯ ಪ್ರಮುಖ ಬೆಳೆಗಳಾದ ಕಾಫಿ, ಅಡಿಕೆ, ಕಾಳು ಮೆಣಸು ಬೆಳೆಗಳಿಗೆ ಸಮಸ್ಯೆ ಉಂಟಾಗಿದ್ದು, ಅಜ್ಜಂಪುರ ತಾಲೂಕಿನ ಶಿವನಿ ಬಳಿ ಈರುಳ್ಳಿ ಬೆಳೆಗಳು ಕೊಳೆತುಹೋಗಿವೆ. ಹಾವೇರಿ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆಯಿಂದ ಜಿಲ್ಲೆಯಲ್ಲಿ ನೂರಾರು ಮನೆಗಳಿಗೆ ನೀರು ನುಗಿದೆ. ಹಲವು ಗ್ರಾಮಗಳ ನಡುವಿನ ರಸ್ತೆಗಳ ಮೇಲೆ ನೀರು ಹರಿಯುತ್ತಿದ್ದು, ರಸ್ತೆ ಸಂಪರ್ಕ ಸಂಪೂರ್ಣ ಬಂದ್ ಆಗಿದೆ. ದಾವಣಗೆರೆ ಜಿಲ್ಲೆಯಾದ್ಯಂತ ವರ್ಷಧಾರೆ ಮುಂದುವರಿದಿದ್ದು, ಸಾರ್ವಜನಿಕ ಆಸ್ತಿ ಪಾಸ್ತಿಗೆ ಸಾಕಷ್ಟು ಹಾನಿ ಸಂಭವಿಸಿದೆ. ದಾವಣಗೆರೆ ತಾಲೂಕಿನ ಮಂಡಲೂರು ಸೇತುವೆ ಕೊಚ್ಚಿ ಹೋದ ಪರಿಣಾಮ ಸಂಪರ್ಕ ಕಡಿತಗೊಂಡಿದೆ. ೫೦ ಕ್ಕೂ ಹೆಚ್ಚು

ಮನೆಗಳಿಗೆ ಹಾನಿ ಸಂಭವಿಸಿದ್ದು, ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ಕಟಾವಿಗೆ ಬಂದಿದ್ದ ಭತ್ತದ ಬೆಳೆ ನೆಲಕಚ್ಚಿದೆ.

<><*<><>*><>

ರಾಜ್ಯದ ಹಲವೆಡೆ ಈಶಾನ್ಯ ಮಾನ್ಸೂನ್ ಸಕ್ರಿಯವಾಗಿತ್ತು. ಬೆಂಗಳೂರು ನಗರದ ಕೆವಿಎಸ್‌ಎನ್‌ಡಿಎಂಸಿ ಕ್ಯಾಂಪಸ್‌ನಲ್ಲಿ ೧೪ ಸೆಂಟಿ ಮೀಟರ್ ದಾಖಲೆಯ ಮಳೆಯಾಗಿದೆ. ಚಿತ್ರದುರ್ಗ ಜಿಲ್ಲೆಯ ನಾಯಕನ ಹಟ್ಟಿಯಲ್ಲಿ ೧೩ ಸೆಂಟಿ ಮೀಟರ್ ಮಳೆಯಾಗಿದೆ. ತುಮಕೂರು, ಚಿತ್ರದುರ್ಗ, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಉತ್ತರಕನ್ನಡ, ಉಡುಪಿ, ಧಾರಾವಾಡ, ಹಾವೇರಿ, ದಾವಣಗೆರೆ, ಮೈಸೂರು, ರಾಮನಗರದಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರಿನಲ್ಲೂ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕರಾದ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಹವಾಮಾನ ಇಲಾಖೆ ನಿರ್ದೇಶಕರು

<><*<><>*><>

ವಿಧಾನಸಭೆ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ ಮುಂದುವರೆದಿದ್ದು, ಈವರೆಗೆ ಒಟ್ಟು ೨೦ ನಾಮಪತ್ರಗಳು ಸಲ್ಲಿಕೆಯಾಗಿವೆ. ಶಿಗ್ಗಾಂವಿ ೧೦, ಸಂಡೂರು ೧, ಚೆನ್ನಪಟ್ಟಣದಲ್ಲಿ ೯ ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ಹಾವೇರಿ ಜಿಲ್ಲೆ ಶಿಗ್ಗಾಂವಿಯಲ್ಲಿ ಇಂದು ಮೂವರು ಅಭ್ಯರ್ಥಿಗಳಿಂದ ನಾಲ್ಕು ನಾಮಪತ್ರ ಸಲ್ಲಿಕೆಯಾಗಿವೆ. ಇದೇ ೨೫ ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ೨೮ ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ೩೦ ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನಾಂಕವಾಗಿದೆ.  ಇನ್ನೊಂದೆಡೆ ಉಪಚುನಾವಣೆ ಹಿನ್ನಲೆಯಲ್ಲಿ ಹಾವೇರಿ ಜಿಲ್ಲೆಯ ತಡಸ, ವಡಘಟ್ಟ ಮತ್ತು ಕೋಣನಕೇರಿ ಗ್ರಾಮದ ಜಿಲ್ಲಾ ಗಡಿಭಾಗದಲ್ಲಿ ಸ್ಥಾಪಿಸಲಾದ ಚೆಕ್‌ಪೋಸ್ಟ್‌ಗಳಿಗೆ ಇಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್ ಭೇಟಿ ನೀಡಿ, ವಾಹನ ತಪಾಸಣೆ ಕಾರ್ಯದ ಪರಿಶೀಲನೆ ನಡೆಸಿದರು.

<><*<><>*><>

ಬ್ರಿಟಿಷರ ವಿರುದ್ಧ ಸ್ವಾತಂತ್ರ್ಯ ಕಹಳೆ ಮೊಳಗಿಸಿ, ಹೋರಾಟದ ವೀರತ್ವ ಮೆರೆದು ೧೮೨೪ ರಲ್ಲಿ ಬ್ರಿಟಿಷ್ ಅಧಿಕಾರಿ ಥ್ಯಾಕರೆಯನ್ನು ಹತ್ಯೆಗೈದ ಐತಿಹಾಸಿಕ ಘಟನೆಗೆ ಇನ್ನೂರು ವರ್ಷ ಸಂದಿದೆ. ಚನ್ನಮ್ಮನ ವಿಜಯೋತ್ಸವದ ೨೦೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ನಡೆಯಲಿರುವ ಅದ್ದೂರಿ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ನಾಳೆಯಿಂದ ಇದೇ ೨೫ರವರೆಗೆ ಮೂರು ದಿನಗಳ ಕಾಲ ಜರುಗಲಿರುವ ಕಿತ್ತೂರು ಉತ್ಸವ ಕಾರ್ಯಕ್ರಮದಲ್ಲಿ ರಾಜ್ಯ, ರಾಷ್ಟ್ರ ಮಟ್ಟದ ಕಲಾವಿದರುಗಳು ಭಾಗವಹಿಸಲಿದ್ದು, ವೈವಿದ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.  ನಾಳೆ ಬೆಳಿಗ್ಗೆ ವೀರಜ್ಯೋತಿ ಸ್ವಾಗತ, ಧ್ವಜಾರೋಹಣ, ಮೆರವಣಿಗೆ, ವಸ್ತುಪ್ರದರ್ಶನ ಮಳಿಗೆ ಉದ್ಘಾಟನೆ ಮತ್ತಿತರ ಕಾರ್ಯಕ್ರಮಗಳು ಜರುಗಲಿವೆ. ಸಂಜೆ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸುವ ಸಾಧ್ಯತೆಯಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

ಧ್ವನಿ : ಜಿಲ್ಲಾಧಿಕಾರಿ ಮಹಮ್ಮದ್ ರೋಷನ್

<><*<><>*><>

ಪಿಎಸ್‌ಐ ನೇಮಕಾತಿ ತಮ್ಮ ಹೋರಾಟಕ್ಕೆ ಸಂದ ಜಯ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರದ ಭ್ರಷ್ಟ ವ್ಯವಸ್ಥೆಯಿಂದ ಪ್ರತಿಭಾವಂತ ಪಿಎಸ್‌ಐ ಅಭ್ಯರ್ಥಿಗಳು ಕಟ್ಟಿಕೊಂಡಿದ್ದ ಕನಸು ಕಮರಿಹೋಗಿತ್ತು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಮೇಲೆ ನಡೆಸಿದ ೫೪೫ ಪಿಎಸ್‌ಐ ಹುದ್ದೆಗಳ ಪ್ರಮಾಣಿಕ ನೇಮಕಾತಿಯೇ ಬಿಜೆಪಿಗೆ ಕೊಡಬಹುದಾದ ಅತ್ಯುತ್ತಮ ಉತ್ತರ ಎಂದು ಹೇಳಿದ್ದಾರೆ.

<><*<><>*><>

ಎಮ್ಮೆ ಹಸುಗಳು ಸಾವನ್ನಪ್ಪಿದರೆ ಪರಿಹಾರವಾಗಿ ೧೦ ಸಾವಿರ ರೂಪಾಯಿ ನೀಡಲಾಗುವುದು ಎಂದು ಪಶುಸಂಗೋಪನಾ ಇಲಾಖೆ ಸಚಿವ ಕೆ. ವೆಂಕಟೇಶ್ ತಿಳಿಸಿದ್ದಾರೆ. ಮೈಸೂರಿನ ವರುಣಾದಲ್ಲಿ ಮಾತನಾಡಿದ ಅವರು, ಪಶುಸಂಗೋಪನಾ ಇಲಾಖೆಯಿಂದ ಗ್ರಾಮಾಂತರ ಮಹಿಳೆಯರಿಗಾಗಿ ೨೦ ನಾಟಿ ಕೋಳಿಗಳನ್ನು ನೀಡಲಾಗುವುದು ಎಂದು ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>